**APRIL 22, 2026**
**ALL INDIA RADIO- DHARWAD**
**PRADESH SAMACHARA (KANNADA) 7:05 AM**

## ಮುಖ್ಯಾಂಶಗಳು

- **ಗ್ಯಾರಂಟಿ ಯೋಜನೆಗಳ** ಅನುಷ್ಠಾನದ ಜೊತೆ ಅಭಿವೃದ್ಧಿ ಕಾರ್ಯಗಳಿಗೆ ಅಗತ್ಯ ಅನುದಾನ–ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟನೆ.

- **2 ಸಾವಿರ ಕೋಟಿಗೂ ಹೆಚ್ಚಿನ** ಮೌಲ್ಯದ ಕೃಷಿ ಯಂತ್ರೋಪಕರಣಗಳನ್ನು ರಾಜ್ಯದ ರೈತರಿಗೆ ನೀಡಲಾಗಿದೆ–ಕೃಷಿ ಸಚಿವ ಎನ್. ಚಲುವರಾಯಸ್ವಾಮಿ ಹೇಳಿಕೆ.

- **ರಾಜ್ಯದೆಲ್ಲೆಡೆ** ಅದ್ವೈತ ಸಿದ್ಧಾಂತ ಪ್ರತಿಪಾದಕ ಶಂಕರಾಚಾರ್ಯ ಜಯಂತಿ: ವಿಧಾಯಕ ಕಾರ್ಯಕ್ರಮಗಳ ಮೂಲಕ ಆಚರಣೆ.

- **'ಫ್ರೂಟ್ಸ್'** ತಂತ್ರಾಂಶದಲ್ಲಿ ಇ–ಕೆವೈಸಿ ಮತ್ತು ಡಿಜಿಟಲ್ ಸಹಮತಿ ಪಡೆಯುವುದು ಕಡ್ಡಾಯ– ಮುಖ್ಯ ಕಾರ್ಯದರ್ಶಿ ನಿರ್ದೇಶನ.

## ಈಗ ವಾರ್ತೆಗಳ ವಿವರ

*******

**ರಾಜ್ಯದಲ್ಲಿ ಜಾರಿಗೊಳಿಸಿರುವ** ಗ್ಯಾರಂಟಿ ಯೋಜನೆಗಳ ಅನುಷ್ಠಾನದ ಜೊತೆಗೆ ಅಭಿವೃದ್ಧಿ ಕಾರ್ಯಗಳಿಗೆ ಅಗತ್ಯವಿರುವ ಅನುದಾನ ಕೂಡ ನೀಡಲಾಗುತ್ತಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟಪಡಿಸಿದ್ದಾರೆ. ಚಾಮರಾಜನಗರ ಜಿಲ್ಲೆ ಗುಂಡ್ಲುಪೇಟೆಯಲ್ಲಿ ಆಯೋಜಿಸಿದ್ದ 110 ಕೆರೆಗಳಿಗೆ ನೀರು ತುಂಬುವ ಯೋಜನೆಗೆ ಶಂಕುಸ್ಥಾಪನೆ ನೆರವೇರಿಸಿ ಮಾತನಾಡಿದ ಅವರು, ಗ್ಯಾರಂಟಿ ಯೋಜನೆಗಳಿಂದಾಗಿ ರಾಜ್ಯದ ಅಭಿವೃದ್ಧಿ ಕುಂಠಿತವಾಗಿದೆ ಎನ್ನುವ ವಿಪಕ್ಷಗಳ ಆರೋಪದಲ್ಲಿ ಹುರುಳಿಲ್ಲ ಎಂದರು. ಗುಂಡ್ಲುಪೇಟೆಯಲ್ಲಿ ಕುಡಿಯುವ ನೀರಿಗಾಗಿ 110 ಕೆರೆಗಳನ್ನು ತುಂಬಿಸಲು 475 ಕೋಟಿ ರೂಪಾಯಿ ವೆಚ್ಚದ ಯೋಜನೆಗೆ ಚಾಲನೆ

ನೀಡಲಾಗಿದೆ. ಅಲ್ಲದೇ 48 ಕೋಟಿ ರೂಪಾಯಿಗಳ ಅಭಿವೃದ್ಧಿ ಕೆಲಸಗಳಿಗೆ ಶಂಕುಸ್ಥಾಪನೆ ಹಾಗೂ ಉದ್ಘಾಟನೆ ಮಾಡಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

*******

**2 ಸಾವಿರ ಕೋಟಿಗೂ ಹೆಚ್ಚಿನ** ಮೌಲ್ಯದ ಕೃಷಿ ಯಂತ್ರೋಪಕರಣಗಳನ್ನು ರಾಜ್ಯದ ರೈತರಿಗೆ ನೀಡಲಾಗಿದೆ ಎಂದು ಕೃಷಿ ಸಚಿವ ಎನ್. ಚಲುವರಾಯಸ್ವಾಮಿ ಹೇಳಿದ್ದಾರೆ. ಮಂಡ್ಯ ವಿಶ್ವವಿದ್ಯಾಲಯದ ಆವರಣದಲ್ಲಿ ಕೃಷಿ ಇಲಾಖೆ ವತಿಯಿಂದ ಆಯೋಜಿಸಿದ್ದ ಹೈಟೆಕ್ ಹಾರ್ವೆಸ್ಟ್ ಹಬ್ ಮತ್ತು ಸೆಕೆಂಡರಿ ಕೃಷಿ ಯೋಜನೆಗಳ ರೈತ ಫಲಾನುಭವಿಗಳಿಗೆ ಯಂತ್ರೋಪಕರಣ ವಿತರಣಾ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು. ಈ ಯೋಜನೆಯಡಿ ಪರಿಶಿಷ್ಟ ವರ್ಗಗಳಿಗೆ 50 ಲಕ್ಷ ಮತ್ತು ಸಾಮಾನ್ಯ ವರ್ಗಗಳಿಗೆ 40 ಲಕ್ಷ ರೂಪಾಯಿಗಳ ಸಬ್ಸಿಡಿ ದರದಲ್ಲಿ ಹೈಟೆಕ್ ಹಾರ್ವೆಸ್ಟ್ ಹಬ್ ನೀಡಲಾಗುತ್ತದೆ. ದೇಶದ ಯಾವುದೇ ರಾಜ್ಯದಲ್ಲೂ ಇಂಥ ಯೋಜನೆ ಇಲ್ಲ. ರಾಜ್ಯದಲ್ಲಿ 400 ಕ್ಕೂ ಹೈಟೆಕ್ ಹಾರ್ವೆಸ್ಟ್ ಹಬ್ ಯಂತ್ರಗಳನ್ನು ರೈತರಿಗೆ ನೀಡಲಾಗಿದೆ ಎಂದು ಹೇಳಿದರು. ಕೃಷಿ ಕೆಲಸಗಳಿಗೆ ಮಾನವ ಸಂಪನ್ಮೂಲ ಕಡಿಮೆಯಾಗಿರುವ ಈ ಕಾಲಘಟ್ಟದಲ್ಲಿ ಈ ಯಂತ್ರೋಪಕರಣಗಳನ್ನು ಬಳಸಿ ಕಡಿಮೆ ವೆಚ್ಚದಲ್ಲಿ ಹೆಚ್ಚು ಪರಿಣಾಮಕಾರಿಯಾಗಿ ಬೆಳೆಗಳನ್ನು ಕಟಾವು ಮಾಡಬಹುದಾಗಿದೆ ಎಂದು ಸಚಿವರು ಹೇಳಿದರು.

*******

**ಮಳೆಗಾಲದಲ್ಲಿ ಎದುರಾಗುವ** ಪ್ರಾಕೃತಿಕ ವಿಕೋಪಗಳನ್ನು ಎದುರಿಸಲು ಜಿಲ್ಲಾಡಳಿತ ಅಗತ್ಯ ಸಿದ್ಧತೆಗಳನ್ನು ಆರಂಭಿಸಬೇಕು ಎಂದು ದಕ್ಷಿಣ ಕನ್ನಡ ಸಂಸದ ಕ್ಯಾಪ್ಟನ್ ಬ್ರಿಜೇಶ್ ಚೌಟ ಸೂಚನೆ ನೀಡಿದ್ದಾರೆ. ದಕ್ಷಿಣ ಕನ್ನಡ ಜಿಲ್ಲಾ ಪಂಚಾಯತ್ ಸಭಾಂಗಣದಲಿ ನಡೆದ ಸಭೆಯಲ್ಲಿ ಮಾತನಾಡಿದ ಅವರು, ರಾಜಾ ಕಾಲುವೆಗಳ ಹೂಳೆತ್ತುವಿಕೆ ಕಾಮಗಾರಿ, ಒಳಚರಂಡಿ ವ್ಯವಸ್ಥೆಯನ್ನು ಸುಸ್ಥಿತಿಯಲ್ಲಿಡುವ ಕಾರ್ಯ ಸೇರಿದಂತೆ ಅಗತ್ಯ ಕಾರ್ಯಗಳು ಈಗಿಂದೀಗಲೇ ಆರಂಭವಾಗಬೇಕು. ಅಧಿಕಾರಿಗಳು ಸಮಸ್ಯೆ ಎದುರಾಗುವ ಪ್ರದೇಶಗಳ ಪಟ್ಟಿಯನ್ನು ತಯಾರಿಸಿ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದರು. ಮಂಗಳೂರು ನಗರದ ಪಂಪ್‌ವಲ್‌ನಿಂದ ಪಡೀಲ್ ಹಾಗೂ ಪಂಪ್‌ವೆಲ್‌ನಿಂದ ತಲಪಾಡಿ ಭಾಗದ ರಾಷ್ಟ್ರೀಯ ಹೆದ್ದಾರಿಗಳಲ್ಲಿ ಗೂಡಂಗಡಿ, ಅಕ್ರಮ ಕಟ್ಟಡಗಳು ನಿರ್ಮಾಣಗಳಾಗಿದ್ದು, ಇವುಗಳ ತೆರವಿಗೆ ಕ್ರಮ ತೆಗೆದುಕೊಳ್ಳಬೇಕು. ಅಲ್ಲದೆ ಹೆದ್ದಾರಿ ಬದಿಗಳಲ್ಲಿ ತ್ಯಾಜ್ಯ ಎಸೆದುಹೋಗುವವರ ಸಂಖ್ಯೆ ಹೆಚ್ಚಾಗಿದ್ದು, ನಿಯಮ ಉಲ್ಲಂಘಿಸುವವರ ವಿರುದ್ಧ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು ಎಂದು ಸಂಸದರು ಸೂಚನೆ ನೀಡಿದರು.

*******

**ಶಿಕ್ಷಣವು ಜ್ಞಾನ ಸಂಪಾದನೆಯ ಜೊತೆ, ಆತ್ಮ ವಿಶ್ವಾಸ ಮತ್ತು ಸಾಮಾಜಿಕ ಸೇವೆಯ ಮಾರ್ಗವಾಗಿದೆ** ಎಂದು ರಾಜ್ಯಪಾಲ ಥಾವರಚಂದ ಗೆಹ್ಲೋಟ್ ಅಭಿಪ್ರಾಯಪಟ್ಟಿದ್ದಾರೆ. ವಿಜಯಪುರ ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯದ 17 ನೇ ಘಟಿಕೋತ್ಸವದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಈ ಯುಗವು ಅವಕಾಶಗಳು ಮತ್ತು ಸವಾಲುಗಳಿಂದ ಕೂಡಿದೆ. ಅಂತಹ ಪರಿಸ್ಥಿತಿಯಲ್ಲಿ, ನೈತಿಕ ಮೌಲ್ಯಗಳು, ಸಾಮಾಜಿಕ ಜವಾಬ್ದಾರಿ ಮತ್ತು ಸೂಕ್ಷ್ಮತೆಯ ಜೊತೆಗೆ ಜ್ಞಾನವನ್ನು ಕೊಂಡೊಯ್ಯಬೇಕಾಗುತ್ತದೆ ಎಂದರು. ಮಹಿಳೆಯರು ಖಗೋಳಶಾಸ್ತ್ರ, ಬಾಹ್ಯಾಕಾಶ ಪ್ರಯಾಣ, ವೈದ್ಯಕೀಯ, ತಂತ್ರಜ್ಞಾನ, ಎಂಜಿನಿಯರಿಂಗ್, ವಾಣಿಜ್ಯ, ಗಣಿತ, ಮಿಲಿಟರಿ ಸೇವೆ ಮತ್ತು ಕ್ರೀಡೆಗಳಂತಹ ವೈವಿಧ್ಯಮಯ ಕ್ಷೇತ್ರಗಳಲ್ಲಿ ತಮ್ಮ ಅಸ್ಮಿತೆಯನ್ನು ಸಾಬೀತುಪಡಿಸಿದ್ದಾರೆ ಎಂದು ರಾಜ್ಯಪಾಲರು ಪ್ರಶಂಸೆ ವ್ಯಕ್ತಪಡಿಸಿದರು. ಘಟಿಕೋತ್ಸವದಲ್ಲಿ, ಧಾರವಾಡದ ಜಾನಪದ ಕಲಾವಿದೆ ಪಾರ್ವತೆವ್ವ ಹೊಂಗಲ್, ಸಾಹಿತಿ ಕಲಬುರಗಿಯ ಸಂಗೀತಾ ಎನ್.ಕಟ್ಟಿಮನಿ ಹಾಗೂ ಬಾಗಲಕೋಟೆ ಜಿಲ್ಲೆ, ಜಮಖಂಡಿಯ ಉದ್ಯಮಿ ಆಶಾದೇವಿ ಗುಡಗುಂಟಿ ಭಾಜನರಾಗಿದ್ದಾರೆ. ಅವರಿಗೆ ಗೌರವ ಡಾಕ್ಟರೇಟ್ ಪ್ರದಾನ ಮಾಡಲಾಯಿತು.

*******

**ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್** ಅವರು ಇಂದು ರಾಜ್ಯಕ್ಕೆ ಆಗಮಿಸಲಿದ್ದು, ವಿವಿಧ ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳಲಿದ್ದಾರೆ. ಬೀದರ್‌ನ ಚೆನ್ನಬಸವ ದೇವರ ಸಮಾಧಿ ಬಳಿ ನಡೆಯಲಿರುವ ಡಾ.ಬಸವಲಿಂಗ ಸ್ವಾಮೀಜಿ ಅವರ 75ನೇ ವರ್ಷದ ಸಂಭ್ರಮಾಚರಣೆಯಲ್ಲಿ ಪಾಲ್ಗೊಳ್ಳಲಿದ್ದಾರೆ. ಬಳಿಕ ಕಲಬುರಗಿಗೆ ತೆರಳಲಿರುವ ಅವರು, ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದ ಹತ್ತನೇ ಘಟಿಕೋತ್ಸವದಲ್ಲಿ ಪಾಲ್ಗೊಂಡು ಘಟಿಕೋತ್ಸವ ಭಾಷಣ ಮಾಡಲಿದ್ದಾರೆ.

*******

**ಈಗ ಪ್ರಕಟಣೆ ನಂತರ ಪ್ರದೇಶ ಸಮಾಚಾರ ಮುಂದುವರಿಯುವುದು..**

**ಪ್ರಕಟಣೆ–42 ಸೆಕೆಂಡ್ಸ್**

**ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ**

*******

**ಅದ್ವೈತ ಸಿದ್ಧಾಂತದ ಸಾರವನ್ನು** ಜಗತ್ತಿಗೆ ಸಾರಿದ ಶಂಕರಾಚಾರ್ಯರ ಜಯಂತಿಯನ್ನು ನಿನ್ನೆ ರಾಜ್ಯದೆಲ್ಲೆಡೆ ಹಲವು ವಿಧಾಯಕ ಕಾರ್ಯಕ್ರಮಗಳ ಮೂಲಕ ಶ್ರದ್ಧಾ, ಭಕ್ತಿಯಿಂದ ಆಚರಿಸಲಾಯಿತು. ಈ ಸಂದರ್ಭದಲ್ಲಿ ಭಾವಚಿತ್ರ ಮೆರವಣಿಗೆ, ಉಪನ್ಯಾಸ, ಗೀತ ಗಾಯನ ವಿಚಾರ ಸಂಕಿರಣ ಸೇರಿದಂತೆ ಹಲವು

ಕಾರ್ಯಕ್ರಮಗಳನ್ನು ಆಯೋಜಿಸಲಾಗಿತ್ತು. **ಉಡುಪಿಯಲ್ಲಿ ನಡೆದ** ಕಾರ್ಯಕ್ರಮದಲ್ಲಿ ಸಂಸದ ಕೋಟ ಶ್ರೀನಿವಾಸ ಪೂಜಾರಿ, ಶಂಕರಾಚಾರ್ಯರ ಭಾವಚಿತ್ರಕ್ಕೆ ಪುಷ್ಪಾರ್ಚನೆ ನೆರವೇರಿಸಿ, ಗೌರವ ಸಲ್ಲಿಸಿದರು. **ದಕ್ಷಿಣ ಕನ್ನಡ ಜಿಲ್ಲಾಡಳಿತದ** ವತಿಯಿಂದ ಆಯೋಜಸಿದ್ದ ಶ್ರೀ ಶಂಕರಾಚಾರ್ಯ ಜಯಂತಿ ಕಾರ್ಯಕ್ರಮ ಉದ್ಘಾಟಿಸಿದ ವಿಧಾನ ಪರಿಷತ್ ಸದಸ್ಯ ಐವನ್ ಡಿಸೋಜ, ಶಂಕರಾಚಾರ್ಯರ ತತ್ವಗಳು ಸಾರ್ವಕಾಲಿಕ. ಅವರ ಆದರ್ಶವನ್ನು ಸಮಾಜ ಪಾಲಿಸಬೇಕಿದೆ ಎಂದರು. **ಗದಗನಲ್ಲಿ ನಡೆದ** ಶಂಕರಾಚಾರ್ಯ ಜಯಂತಿಯನ್ನು ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ಉದ್ಘಾಟಿಸಿದರು. **ಕೊಪ್ಪಳದಲ್ಲಿ ನಡೆದ** ಶ್ರೀ ಶಂಕರಾಚಾರ್ಯ ಜಯಂತಿಯನ್ನು ಶಾಸಕ ಕೆ.ರಾಘವೇಂದ್ರ ಇಟ್ನಾಳ ಉದ್ಘಾಟಿಸಿದರು. ನಿವೃತ್ತ ಪ್ರಾಚಾರ್ಯ ಡಾ.ವಿದ್ಯಾನಾಥ ಶಾಸ್ತ್ರೀಗಳು ಶಂಕರಾಚಾರ್ಯರ ಕುರಿತು ವಿಶೇಷ ಉಪನ್ಯಾಸ ನೀಡಿದರು.

*******

**ವಿಜಯನಗರ ಜಿಲ್ಲೆಯಲ್ಲಿ** ಬಿಸಿಲಿನ ತಾಪಮಾನ ಹೆಚ್ಚಾಗುತ್ತಿದ್ದು, ಜನ, ಜಾನುವಾರುಗಳಿಗೆ ಕುಡಿಯುವ ನೀರಿನ ತೊಂದರೆಯಾಗದಂತೆ ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಕವಿತಾ ಮನ್ನಿಕೇರಿ ತಿಳಿಸಿದ್ದಾರೆ. ಸಾರ್ವಜನಿಕ ಸ್ಥಳಗಳಾದ ಬಸ್ ನಿಲ್ದಾಣ, ಸಮುದಾಯ ಆರೋಗ್ಯ ಕೇಂದ್ರ, ಪ್ರಾಥಮಿಕ ಆರೋಗ್ಯ ಕೇಂದ್ರ, ಎಪಿಎಂಸಿ ಮಾರುಕಟ್ಟೆಗಳಲ್ಲಿ ಸಾರ್ವಜನಿಕರಿಗಾಗಿ ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಲಾಗಿದೆ ಎಂದು ತಿಳಿಸಿರುವ ಅವರು, ಈ ಕುರಿತು ಪ್ರದೇಶ ಸಮಾಚಾರಕ್ಕಾಗಿ ಹೆಚ್ಚಿನ ಮಾಹಿತಿ ನೀಡಿದ್ದಾರೆ.

**ಧ್ವನಿ–ಕವಿತಾ ಮನ್ನಿಕೇರಿ– ಸೆಕೆಂಡ್ಸ್**

*******

**ರಾಜ್ಯದ ರೈತರ ಸಮಗ್ರ ಮಾಹಿತಿಯನ್ನು ಒಳಗೊಂಡಿರುವ ‘ಫ್ರೂಟ್ಸ್’ ತಂತ್ರಾಂಶದಲ್ಲಿ** ನೋಂದಾಯಿತರಾಗಿರುವ ಎಲ್ಲಾ ರೈತರು ಇ–ಕೆವೈಸಿ ಮಾಡಿಸುವುದು ಹಾಗೂ ಡಿಜಿಟಲ್ ಸಹಮತಿ–Digital Consent ನೀಡುವುದನ್ನು ಸರ್ಕಾರ ಕಡ್ಡಾಯಗೊಳಿಸಿದೆ. ಈ ಕುರಿತು ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ.ಶಾಲಿನಿ ರಜನೀಶ್ ಅವರು ಸಂಬಂಧಪಟ್ಟ ಎಲ್ಲಾ ಇಲಾಖೆಗಳಿಗೆ ಮಹತ್ವದ ಸೂಚನೆ ನೀಡಿದ್ದು, ಭಾರತ ಸರ್ಕಾರದ ‘ಡಿಜಿಟಲ್ ಅಗ್ರಿ ಮಿಷನ್’ ಅಡಿಯಲ್ಲಿ ರಾಜ್ಯ ರೈತ ನೋಂದಣಿ ಸ್ಥಾಪಿಸಲು ಈ ಕ್ರಮ ಕೈಗೊಳ್ಳಲಾಗಿದೆ ಎಂದಿದ್ದಾರೆ. ಫ್ರೂಟ್ಸ್ ತಂತ್ರಾಂಶದಲ್ಲಿ ಈಗಾಗಲೇ 1 ಕೋಟಿಗೂ ಹೆಚ್ಚು ರೈತರು ಭೂ ಹಿಡುವಳಿ ವಿವರಗಳೊಂದಿಗೆ ನೋಂದಾಯಿಸಿಕೊಂಡಿದ್ದು, ಅವರಲ್ಲಿ ಸುಮಾರು 71 ಲಕ್ಷಕ್ಕೂ ಹೆಚ್ಚು

ರೈತರು ಭೂ ಹಿಡುವಳಿಗಳನ್ನು ಹೊಂದಿದ್ದಾರೆ. ಈಗ ಇವರೆಲ್ಲರೂ ಇ–ಕೆವೈಸಿ ಮಾಡಿಸುವುದು ಕಡ್ಡಾಯ ಎಂದು ತಿಳಿಸಿದ್ದಾರೆ.

*******

**ಕರ್ನಾಟಕ ರಾಜ್ಯ ಮುಕ್ತ** ವಿಶ್ವವಿದ್ಯಾನಿಲಯದ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ಕೇಂದ್ರದ ವತಿಯಿಂದ ಕೆ–ಸೆಟ್ ಹಾಗೂ ಯುಜಿಸಿ–ನೆಟ್ ಮತ್ತು ಕಿರಿಯ ಸಂಶೋಧನಾ ವೇತನ ಪರೀಕ್ಷೆಗಳಿಗೆ ಸಿದ್ಧತೆ ನಡೆಸುತ್ತಿರುವ ಅಭ್ಯರ್ಥಿಗಳಿಗಾಗಿ 45 ದಿನಗಳ ತರಬೇತಿ ಶಿಬಿರ ಆಯೋಜಿಸಲಾಗಿದೆ. ಮೈಸೂರಿನಲ್ಲಿರುವ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದ ಕೇಂದ್ರ ಕಚೇರಿಯಲ್ಲಿ ತರಬೇತಿ ನಡೆಯಲಿದ್ದು, ಆಸಕ್ತ ಅಭ್ಯರ್ಥಿಗಳು ಹೆಚ್ಚಿನ ವಿವರಗಳು ಮತ್ತು ನೋಂದಣಿಗಾಗಿ ದೂರವಾಣಿ ಸಂಖ್ಯೆ 0821–2515944 ನ್ನು ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

*******

**ವರನಟ ಡಾ.ರಾಜಕುಮಾರ್** ಅವರ 97 ನೇ ಜನ್ಮ ದಿನ ಆಚರಣೆ ಕಾರ್ಯಕ್ರಮವನ್ನು ನಾಳೆ ಬೆಳಿಗ್ಗೆ 10.30 ಕ್ಕೆ ಬೆಂಗಳೂರಿನ ಕಂಠೀರವ ಸ್ಟುಡಿಯೋ ಆವರಣದಲ್ಲಿ ಆಯೋಜಿಸಲಾಗಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ.

*******

## ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು

**ಗ್ಯಾರಂಟಿ ಯೋಜನೆಗಳ** ಅನುಷ್ಠಾನದ ಜೊತೆ ಅಭಿವೃದ್ಧಿ ಕಾರ್ಯಗಳಿಗೆ ಅಗತ್ಯ ಅನುದಾನ–ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟನೆ.

**2 ಸಾವಿರ ಕೋಟಿಗೂ ಹೆಚ್ಚಿನ** ಮೌಲ್ಯದ ಕೃಷಿ ಯಂತ್ರೋಪಕರಣಗಳನ್ನು ರಾಜ್ಯದ ರೈತರಿಗೆ ನೀಡಲಾಗಿದೆ– ಕೃಷಿ ಸಚಿವ ಎನ್. ಚಲುವರಾಯಸ್ವಾಮಿ ಹೇಳಿಕೆ.

**ರಾಜ್ಯದೆಲ್ಲೆಡೆ ಅದ್ವೈತ** ಸಿದ್ಧಾಂತ ಪ್ರತಿಪಾದಕ ಶಂಕರಾಚಾರ್ಯ ಜಯಂತಿ: ವಿಧಾಯಕ ಕಾರ್ಯಕ್ರಮಗಳ ಮೂಲಕ ಆಚರಣೆ.

**‘ಫ್ರೂಟ್ಸ್’ ತಂತ್ರಾಂಶದಲ್ಲಿ** ಇ–ಕೆವೈಸಿ ಮತ್ತು ಡಿಜಿಟಲ್ ಸಹಮತಿ ಪಡೆಯುವುದು ಕಡ್ಡಾಯ– ಮುಖ್ಯ ಕಾರ್ಯದರ್ಶಿ ನಿರ್ದೇಶನ.

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ ಈ ಬೆಳಿಗ್ಗೆ 7 ಗಂಟೆ 35 ನಿಮಿಷಕ್ಕೆ

******END******